ಈ) ಅಂದಾಜು 15 00 ಲಕ್ಷ (ನವೀಕರಣ ಹಾಗೂ ರಸ್ತೆ ಕಾಮಗಾರಿ ಸೇರಿ) ಬೇಕಾಗಬಹುದು

ಉ) ಸೇರಿದೆ

25 (76) ಶ್ರೀ ಶ್ರೀರಾಮರೆಡ್ಡಿ ಜಿ ವಿ (ಬಾಗೇಪಲ್ಲಿ) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಸಣ್ಣ ನೀರಾವರಿ ಕೆರೆಗಳ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆ ಮಾಡಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ,

ಆ) ಡಾ ಡಿ ಎಂ ನಂಜುಂಡಪ್ಪ ವರದಿಯನ್ವಯ ಅತೀ ಹಿಂದುಳಿದ ತಾಲ್ಲೂಕುಗಳಿಗೆ ಸಣ್ಣ ನೀರಾವರಿ ಕೆರೆಗಳ ಅಭಿವೃದ್ಧಿಗಾಗಿ ವಿಶೇಷ ಅನುದಾನ ಮಂಜೂರು ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ,

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ ?

ಶ್ರೀ ಬಿ ಎಸ್ ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು)

ಅ) ಕೆರೆಗಳ ಸ್ಥಿತಿ–ಗತಿಗಳನ್ನು ಆಧರಿಸಿ ಹಾಗೂ ಅಚ್ಚುಕಟ್ಟಿನಲ್ಲಿ ಬರುವ ರೈತರ ಬೇಡಿಕೆಗೆ ಅನುಗುಣವಾಗಿ ಲಭ್ಯವಿರುವ ಅನುದಾನದಲ್ಲಿ ಕೆರೆಗಳ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ ಇದಕ್ಕಾಗಿ ಪ್ರತ್ಯೇಕವಾದ ಮಾನದಂಡಗಳು ಇರುವುದಿಲ್ಲ

ಆ ಮತ್ತು ಇ) ಮುಂದಿನ ಆರ್ಥಿಕ ವರ್ಷದಲ್ಲಿ ಅನುದಾನದ ಲಭ್ಯತೆಯನ್ನು ಅನುಸರಿಸಿ ಈ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುವುದು

26 (77) ಶ್ರೀ ಜಿ ವಿ ಶ್ರೀರಾಮರೆಡ್ಡಿ (ಬಾಗೇಪಲ್ಲಿ) ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಪ್ರಸ್ತುತ ವರ್ಷದ ಆಯವ್ಯಯದಲ್ಲಿ ಸರ್ಕಾರ ವಿವಿಧ ಇಲಾಖೆಗಳಿಗೆ ನೀಡಲಾದ ಅನುದಾನವೆಷ್ಟು , (ಇಲಾಖಾವಾರು ವಿವರ ನೀಡುವುದು) ,

ಆ) ಈ ಅನುದಾನದಲ್ಲಿ ಇದುವರೆವಿಗೂ ಖರ್ಚಾಗಿರುವ ಹಣ ಎಷ್ಟು , (ಇಲಾಖಾವಾರು ವಿವರ ಒದಗಿಸುವುದು) ,